**All India Radio: Bangalore**
**Regional Bulletin In Kannada**
**08.05.2026 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**08.05.2026 / 2.30 p.m.**
**<><><><>**

ಮುಖ್ಯಾಂಶಗಳು

1. ಗ್ರೇಟರ್ ಬೆಂಗಳೂರು ಪ್ರಾಧಿಕಾರಕ್ಕೆ ಜೂನ್ ೧ಳರಿಂದ ೨ಳರೊಳಗೆ ದಿನಾಂಕ ಘೋಷಿಸುವಂತೆ ರಾಜ್ಯ ಚುನಾವಣಾ ಆಯೋಗ ಸೂಚನೆ
2. ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಸೂರ್ಯಕಾಂತಿ ಖರೀದಿಗೆ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್ ಆದೇಶ
3. ಬೆಂಗಳೂರಿನ ಕಬ್ಬನ್ ಪಾರ್ಕ್‌ನಲ್ಲಿ ಇಂದಿನಿಂದ ೧೦ ದಿನಗಳ ಕಾಲ ಮಾವು-ಹಲಸು ಮೇಳ
4. ರಾಜ್ಯದಲ್ಲಿ ಹೆಚ್ಚುತ್ತಿರುವ ರೈತರ ಆತ್ಮಹತ್ಯೆ ಪ್ರಕರಣ ; ಪ್ರತಿಪಕ್ಷ ನಾಯಕ ಆರ್.ಅಶೋಕ ಕಳವಳ
5. ಆಕಾಶವಾಣಿಯ ೯೦ ವರ್ಷಗಳ ಸಂಭ್ರಮಾಚರಣೆ ; ಬೆಂಗಳೂರು ಹಾಗೂ ಧಾರವಾಡದಲ್ಲಿ ನಡೆದ ವಾಕಥಾನ್‌ಗೆ ಉತ್ತಮ ಪ್ರತಿಕ್ರಿಯೆ

<><><><>

ಗ್ರೇಟರ್ ಬೆಂಗಳೂರು ಪ್ರಾಧಿಕಾರಕ್ಕೆ ಜೂನ್ ೧ಳ ರಿಂದ ೨ಳರ ಅವಧಿಯಲ್ಲಿ ಚುನಾವಣೆ ದಿನಾಂಕ ಘೋಷಣೆ ಮಾಡುವಂತೆ ರಾಜ್ಯ ಚುನಾವಣಾ ಆಯೋಗದ ಮುಖ್ಯ ಆಯುಕ್ತ ಜಿ.ಎಸ್.ಸಂಗ್ರೇಶಿ ಸೂಚನೆ ನೀಡಿದ್ದಾರೆ. ಜಿಬಿಎ ವ್ಯಾಪ್ತಿಯ ಐದು ನಗರ ಪಾಲಿಕೆಗಳ ಚುನಾವಣೆಗೆ ಸಂಬಂಧಿಸಿದಂತೆ ನಡೆದ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬ್ಯಾಲೆಟ್ ಪೇಪರ್‌ನಲ್ಲಿ ಚುನಾವಣೆ ನಡೆಸುವುದಾಗಿ ಅವರು ತಿಳಿಸಿದ್ದಾರೆ. ಚುನಾವಣೆ ನಡೆಸಲು ಈಗಾಗಲೇ ಎಲ್ಲಾ ಕ್ರಮ ತೆಗೆದುಕೊಳ್ಳಲಾಗಿದೆ. ಚುನಾವಣೆ ಮುಂದೂಡುವ ಅಧಿಕಾರ ನಮಗಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

**ಧ್ವನಿ : ಮುಖ್ಯ ಆಯುಕ್ತ ಜಿ.ಎಸ್.ಸಂಗ್ರೇಶಿ**

ಚುನಾವಣೆ ಕುರಿತಂತೆ ಇಂದು ಸಭೆ ನಡೆದಿದ್ದು, ಜಿಬಿಎ ಅಧ್ಯಕ್ಷರಾಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಸಭೆಗೆ ಗೈರಾಗಿದ್ದರು. ಈ ಹಿನ್ನೆಲೆಯಲ್ಲಿ ರಾಜ್ಯ ಚುನಾವಣಾ ಆಯುಕ್ತ ಜಿ.ಎಸ್.ಸಂಗ್ರೇಶಿ ನೇತೃತ್ವದಲ್ಲಿ ಸಭೆ ನಡೆದಿದ್ದು, ಮುಖ್ಯ ಆಯುಕ್ತ ಮಹೇಶ್ವರ್ ರಾವ್, ಸಭೆಯಲ್ಲಿ ಭಾಗವಹಿಸಿದ್ದರು.

<><><><>

ಬೆಂಬಲ ಬೆಲೆ ಯೋಜನೆ ಅಡಿಯಲ್ಲಿ ೨೦೨೫-೨೬ನೇ ಸಾಲಿನ ಹಿಂಗಾರು ಹಂಗಾಮಿನ ಸೂರ್ಯಕಾಂತಿಯನ್ನು ಪ್ರತಿ ಕ್ವಿಂಟಾಲ್‌ಗೆ ೭ ಸಾವಿರದ ೭೨೧ ರೂಪಾಯಿ ದರದಲ್ಲಿ ಖರೀದಿಗೆ ಕಬ್ಬು ಅಭಿವೃದ್ಧಿ, ಸಕ್ಕರೆ, ಜವಳಿ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್ ಆದೇಶ ನೀಡಿದ್ದಾರೆ. ಕೇಂದ್ರ ಸರ್ಕಾರದ ಬೆಂಬಲ ಬೆಲೆ ಮಾರ್ಗಸೂಚಿಗಳ ಅನ್ವಯ ಬಾಗಲಕೋಟೆ, ಬೆಳಗಾವಿ, ಬಳ್ಳಾರಿ, ವಿಜಯಪುರ, ಚಾಮರಾಜನಗರ, ಚಿತ್ರದುರ್ಗ, ಗದಗ, ಕಲಬುರಗಿ, ವಿಜಯನಗರ, ರಾಯಚೂರು ಹಾಗೂ ಧಾರವಾಡ ಜಿಲ್ಲೆಗಳಲ್ಲಿ ಅವಶ್ಯಕತೆಗೆ ಅನುಗುಣವಾಗಿ ಖರೀದಿ ಕೇಂದ್ರಗಳನ್ನು ತೆರೆಯಲು ನಿರ್ದೇಶನ ನೀಡಿದ್ದಾರೆ. ನಾಫೆಡ್ ಮತ್ತು ಎನ್‌ಸಿಸಿಎಫ್ ಸಂಸ್ಥೆಗಳನ್ನು ಕೇಂದ್ರ ಸರ್ಕಾರದ ಖರೀದಿ ಸಂಸ್ಥೆಗಳನ್ನಾಗಿ ಹಾಗೂ ಕರ್ನಾಟಕ ಸಹಕಾರಿ ಎಣ್ಣೆಬೀಜ ಬೆಳೆಗಾರರ ಮಹಾಮಂಡಳವನ್ನು ರಾಜ್ಯ ಸರ್ಕಾರದ ಖರೀದಿ ಸಂಸ್ಥೆಗಳನ್ನಾಗಿ ನೇಮಕ ಮಾಡಲಾಗಿದೆ. ನೋಂದಣಿ ಅವಧಿಯನ್ನು ೫೦ ದಿನ ಹಾಗೂ ಖರೀದಿ ಅವಧಿಯನ್ನು ೬೦ ದಿನ ನಿಗದಿಪಡಿಸಲಾಗಿದ್ದು, ನೋಂದಣಿ ಜೊತೆಗೆ ಖರೀದಿ ಪ್ರಕ್ರಿಯೆ ಆರಂಭಿಸಬೇಕು ಎಂದು ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿ ಅಧ್ಯಕ್ಷರಾಗಿರುವ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ರೈತರ ಹೆಸರಿನಲ್ಲಿ ವರ್ತಕರು ಮತ್ತು ಖರೀದಿ ಸಂಸ್ಥೆಗಳು ಬೆಂಬಲ ಬೆಲೆ ಖರೀದಿ ಕೇಂದ್ರಗಳನ್ನು ದುರ್ಬಳಕೆ ಮಾಡಿಕೊಳ್ಳಲು ಅವಕಾಶ ನೀಡಬಾರದು. ಖರೀದಿ ಪ್ರಗತಿಯ ವಿವರವನ್ನು ಪ್ರತಿ ದಿನ ರಾಜ್ಯ ಸರ್ಕಾರ ಹಾಗೂ ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಗೆ ಒದಗಿಸಬೇಕು ಎಂದು ಸೂಚಿಸಿದ್ದಾರೆ.

<><><>

ತೋಟಗಾರಿಕೆ ಹಾಗೂ ಕರ್ನಾಟಕ ರಾಜ್ಯ ಮಾವು ಅಭಿವೃದ್ಧಿ ಮತ್ತು ಮಾರುಕಟ್ಟೆ ನಿಗಮ ಸಂಯುಕ್ತ ಆಶ್ರಯದಲ್ಲಿ ಬೆಂಗಳೂರಿನ ಕಬ್ಬನ್ ಪಾರ್ಕ್‌ನಲ್ಲಿ ಇಂದಿನಿಂದ ೧೦ ದಿನಗಳ ಕಾಲ ಮಾವು ಮತ್ತು ಹಲಸು ಮೇಳ ನಡೆಯಲಿದೆ. ಗ್ರಾಹಕರಿಗೆ ಕಾರ್ಬೈಡ್ ಮುಕ್ತ ಸಹಜವಾಗಿ ಮಾಗಿದ ಹಣ್ಣುಗಳನ್ನು ರೈತರಿಂದ ನೇರವಾಗಿ ಒದಗಿಸುವುದು, ರುಚಿಯಾದ ತಾಜಾ ಹಣ್ಣುಗಳನ್ನು ಯೋಗ್ಯ ಬೆಲೆಗೆ ದೊರಕುವಂತೆ ಮಾಡುವುದು ಈ ಮೇಳದ ಉದ್ದೇಶವಾಗಿದೆ. ಮೇಳದಲ್ಲಿ ಬಾದಾಮಿ, ಮಲ್ಲಿಕಾ, ಸೆಂದೂರಾ, ರಸಪುರಿ ಸೇರಿದಂತೆ ಹಲವು ತಳಿಗಳು ಹಾಗೂ ಹಲಸಿನ ತಳಿಗಳಾದ ರುದ್ರಾಕ್ಷಿ, ಶಿವರಾತ್ರಿ, ಏಕಾದಶಿ, ಲಾಲ್ ಬಾಗ್ ಮಧುರ ಹಣ್ಣುಗಳು ಖರೀದಿಗೆ ಲಭ್ಯವಿದೆ.

<><><>

ದೇಶದ ಪ್ರಮುಖ ಮಾವು ಉತ್ಪಾದನಾ ಕೇಂದ್ರಗಳಲ್ಲಿ ಒಂದಾಗಿರುವ ಕೋಲಾರ ಜಿಲ್ಲೆಯ ಶ್ರೀನಿವಾಸಪುರ ತಾಲೂಕಿನಲ್ಲಿ ಇದೇ ೧೫ರಿಂದ ಅಧಿಕೃತವಾಗಿ ಮಾವಿನ ಮಾರುಕಟ್ಟೆ ಆರಂಭಗೊಳ್ಳಲಿದೆ. ಸುಮಾರು ೬೫ ಸಾವಿರ ಎಕರೆ ಪ್ರದೇಶದಲ್ಲಿ ಮಾವು ಬೆಳೆಯುವ

ಶ್ರೀನಿವಾಸಪುರ, ‘ಮಾವಿನ ನಾಡು’ ಎಂದು ಖ್ಯಾತಿ ಹೊಂದಿದೆ. ಇಲ್ಲಿನ ಹವಾಮಾನ ಮತ್ತು ಮಣ್ಣಿನ ಗುಣಮಟ್ಟ ಮಾವಿನ ಬೆಳೆಗೆ ಅತ್ಯಂತ ಅನುಕೂಲಕರವಾಗಿದ್ದು, ಉತ್ತಮ ಗುಣಮಟ್ಟದ ಹಣ್ಣು ಉತ್ಪಾದನೆಗೆ ಸಹಕಾರಿಯಾಗಿದೆ. ಇಲ್ಲಿ ಪ್ರಮುಖವಾಗಿ ಬಾದಾಮಿ, ಮಲ್ಲಿಕಾ, ಬೇನಿಶಾ, ಇಮಾಮ್ ಪಸಂದ್, ಶಕ್ಕರ್ ಬೀಜ್, ದೇಸರಿ, ರಾಜಗಿರಾ, ಖುದ್ದೂಸ್, ಕೆಸರ್, ಮುಂತಾದ ತಳಿಗಳು ರೈತರ ಆರ್ಥಿಕ ಆಧಾರವಾಗಿವೆ. ಪಂಜಾಬ್, ಹರಿಯಾಣ, ರಾಜಸ್ಥಾನ್, ಗುಜರಾತ್, ಉತ್ತರ ಪ್ರದೇಶ, ಮಧ್ಯ ಪ್ರದೇಶ, ಪಶ್ಚಿಮ ಬಂಗಾಳ, ತಮಿಳುನಾಡು, ಕೇರಳ, ಆಂಧ್ರ ಪ್ರದೇಶ ಸೇರಿದಂತೆ ಅನೇಕ ರಾಜ್ಯಗಳಿಗೆ ಇಲ್ಲಿಂದ ಮಾವು ರಫ್ತಾಗುತ್ತದೆ. ಮಾವಿನಿಂದ ತಯಾರಾಗುವ ಜ್ಯೂಸ್, ಪಲ್ಪ್ ಹಾಗೂ ಇತರ ಮೌಲ್ಯವರ್ಧಿತ ಉತ್ಪನ್ನಗಳಿಗೂ ವಿದೇಶಗಳಲ್ಲಿ ಉತ್ತಮ ಬೇಡಿಕೆ ಇದೆ.

<><><>

ರಾಜ್ಯದಲ್ಲಿ ರೈತರ ಆತ್ಮಹತ್ಯೆ ಹೆಚ್ಚುತ್ತಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಕಳವಳ ವ್ಯಕ್ತಪಡಿಸಿದ್ದಾರೆ. ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿರುವ ಅವರು, ರಾಜ್ಯ ಸರ್ಕಾರ ರೈತರ ಮೇಲೆ ಗ್ಯಾರಂಟಿ ರಾಜಕೀಯ ಮಾಡುತ್ತಿದೆ ಎಂದು ಆರೋಪಿಸಿದ್ದಾರೆ. ರಾಜ್ಯದಲ್ಲಿ ಒಂದು ವರ್ಷದಲ್ಲಿ ಆತ್ಮಹತ್ಯೆಗಳ ಸಂಖ್ಯೆ ೧ ಸಾವಿರದ ೪೨೩ರಿಂದ ೧ ಸಾವಿರದ ೬೨೭ಕ್ಕೆ ಏರಿಕೆಯಾಗಿರುವುದು ಸರ್ಕಾರದ ವೈಫಲ್ಯಕ್ಕೆ ಹಿಡಿದ ಕೈಗನ್ನಡಿ ಎಂದು ದೂರಿದ್ದಾರೆ.

<><><>

ಆಕಾಶವಾಣಿಯ ೯೦ ವರ್ಷಗಳ ಸಂಭ್ರಮಾಚರಣೆಯ ಅಂಗವಾಗಿ ಬೆಂಗಳೂರು ಆಕಾಶವಾಣಿ ಕೇಂದ್ರದ ವತಿಯಿಂದ ಇಂದು ಆಯೋಜಿಸಲಾಗಿದ್ದ ‘ವಾಕಥಾನ್-೨೦೨೮’ಕ್ಕೆ ಉತ್ತಮ ಸ್ಪಂದನೆ ವ್ಯಕ್ತವಾಯಿತು. ‘೯೦ ವರ್ಷಗಳ ಸಾರ್ಥಕ ಧ್ವನಿ: ಸಂಸ್ಕೃತಿ ಹಾಗೂ ಸದಭಿರುಚಿಯ ಸಂಪರ್ಕ ಸೇತು’ ಎಂಬ ಘೋಷವಾಕ್ಯದೊಂದಿಗೆ ನಡೆದ ಜಾಥಾದಲ್ಲಿ ಮಾಜಿ ಕ್ರಿಕೆಟಿಗ ದೊಡ್ಡ ಗಣೇಶ್, ಖ್ಯಾತ ಚಲನಚಿತ್ರ ನಟ ಅನಿರುದ್ಧ ಜತ್ಕಾರ್ ಪಾಲ್ಗೊಂಡಿದ್ದರು. ಬೆಂಗಳೂರು ಆಕಾಶವಾಣಿ ಕೇಂದ್ರದ ಉಪ ಮಹಾನಿರ್ದೇಶಕರಾದ ಕೆ.ಪಿ.ಸಂಜೀವ್, ಕಾರ್ಯಕ್ರಮ ಮುಖ್ಯಸ್ಥರಾದ ಎ.ಎಸ್.ಶಂಕರನಾರಾಯಣ, ಆಕಾಶವಾಣಿ ಸಿಬ್ಬಂದಿ, ಕ್ರೀಡಾಪಟುಗಳು ಸೇರಿದಂತೆ ೩೦೦ಕ್ಕೂ ಅಧಿಕ ಜನರು ಪಾಲ್ಗೊಂಡಿದ್ದರು. ಬೆಂಗಳೂರಿನ ರಾಜಭವನ ರಸ್ತೆಯಲ್ಲಿರುವ ಆಕಾಶವಾಣಿ ಕೇಂದ್ರದಿಂದ ಆರಂಭವಾದ ಜಾಥಾ, ಕಬ್ಬನ್ ಪಾರ್ಕ್ ಮೂಲಕ ಸಾಗಿ ವಿಧಾನಸೌಧ ಎದುರಗಡೆಯಿಂದ ಸಂಚರಿಸಿ, ಆಕಾಶವಾಣಿ ಕೇಂದ್ರದಲ್ಲಿ ಕೊನೆಗೊಂಡಿತು. ಭಾಗವಹಿಸಿದವರೆಲ್ಲರಿಗೂ ಪ್ರಮಾಣಪತ್ರ ನೀಡಲಾಯಿತು. ಇನ್ನೊಂದೆಡೆ ಆಕಾಶವಾಣಿ ಧಾರವಾಡ ಕೇಂದ್ರವೂ ಇಂದು ಬೆಳಗ್ಗೆ ೮ ಗಂಟೆಗೆ ಜನ ಸಹಭಾಗಿತ್ವದಲ್ಲಿ ಆತ್ಮೀಯ ಶ್ರೋತೃಗಳೊಂದಿಗೆ ’ಆಕಾಶವಾಣಿ @೯೦, ಫಿಟ್ ಇಂಡಿಯಾ ವಾಕಥಾನ್’ ಆಯೋಜಿಸಿತ್ತು. ಈ ವಾಕಥಾನ್‌ನಲ್ಲಿ

ವಿದ್ಯಾರ್ಥಿಗಳು ಸೇರಿದಂತೆ, ವಿಶೇಷ ಆಹ್ವಾನಿತ ಶ್ರೋತೃಗಳು, ಸಾರ್ವಜನಿಕರು, ಆಕಾಶವಾಣಿ ಅಧಿಕಾರಿ ವರ್ಗ ಹಾಗೂ ಸಿಬ್ಬಂದಿ ಪಾಲ್ಗೊಂಡಿದ್ದರು. ದಶಕಗಳ ಕಾಲ ನಾಡಿನ ಕಲೆ, ಸಾಹಿತ್ಯ ಮತ್ತು ಪರಂಪರೆಯನ್ನು ಮನೆಮನೆಗೆ ತಲುಪಿಸಿದ ಆಕಾಶವಾಣಿಯ ಮೈಲಿಗಲ್ಲನ್ನು ಸ್ಮರಿಸಲು ಹಾಗೂ ನಾಡಿನ ಸಂಸ್ಕೃತಿ ಮತ್ತು ಸಾರ್ವಜನಿಕರ ನಡುವಿನ ಬಾಂಧವ್ಯವನ್ನು ಮತ್ತಷ್ಟು ಗಟ್ಟಿಗೊಳಿಸುವ ನಿಟ್ಟಿನಲ್ಲಿ ಈ ವಾಕಥಾನ್ ಹಮ್ಮಿಕೊಳ್ಳಲಾಗಿತ್ತು.

<><><>

ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ರಸಾಯನಶಾಸ್ತ್ರ ವಿಭಾಗವು ಕೆಮಿಕಲ್ ಸೊಸೈಟಿ ಮತ್ತು ಸೆಂಟ್ರಲ್ ಕಾಲೇಜಿನ ರಸಾಯನಶಾಸ್ತ್ರ ಹಳೆಯ ವಿದ್ಯಾರ್ಥಿಗಳ ಸಂಘದ ಸಂಯುಕ್ತ ಆಶ್ರಯದಲ್ಲಿ "ಕೆಮೋತ್ಸವ-೨೦೨೫" ಎಂಬ ವಿನೂತನ ಕಾರ್ಯಕ್ರಮ ಹಮ್ಮಿಕೊಂಡಿತ್ತು. ಭಿತ್ತಿಫಲಕವನ್ನು ಅನಾವರಣಗೊಳಿಸುವ ಮೂಲಕ ವಿವಿಧ ಶೈಕ್ಷಣಿಕ ಸ್ಪರ್ಧೆಗಳನ್ನು ಒಳಗೊಂಡ ಈ ವಿಜ್ಞಾನ ಹಬ್ಬಕ್ಕೆ ಕುಲಪತಿ ಪ್ರೊಫೆಸರ್.ರಮೇಶ್.ಬಿ. ವಿದ್ಯುಕ್ತವಾಗಿ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಅವರು, ಆಧುನಿಕ ತಂತ್ರಜ್ಞಾನದ ತಾಯಿಬೇರಾದ ಮೂಲ ವಿಜ್ಞಾನ ಕಲಿಕೆಗೆ ಹೆಚ್ಚಿನ ಆಸಕ್ತಿ ವಹಿಸುವಂತೆ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

<><><>

ದಾವಣಗೆರೆ ಜಿಲ್ಲೆಯಲ್ಲಿ ಕಳೆದ ಎರಡು ವರ್ಷಗಳಿಂದ ಮಳೆನೀರು ಸಂರಕ್ಷಣೆಗಾಗಿ ಹಮ್ಮಿಕೊಂಡಿರುವ ವಿವಿಧ ಯೋಜನಾಬದ್ಧ ಕಾಮಗಾರಿಗಳ ಫಲವಾಗಿ, ಜಿಲ್ಲೆಯ ಅಂತರ್ಜಲ ಮಟ್ಟವು ಸರಾಸರಿ ೨ ಅಡಿಗಳಷ್ಟು ಏರಿಕೆಯಾಗಿದೆ. ಇದು ಪರಿಸರ ಸಮತೋಲನದ ದೃಷ್ಟಿಯಿಂದ ಆಶಾದಾಯಕ ಬೆಳವಣಿಗೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಿತ್ತೆ ಮಾಧವ ವಿಠ್ಠಲರಾವ್  ತಿಳಿಸಿದ್ದಾರೆ. ಮಳೆನೀರು ವ್ಯರ್ಥವಾಗಿ ಹರಿದು ಹೋಗುವುದನ್ನು ತಡೆದು, ಪ್ರತಿಯೊಂದು ಮನೆಯಲ್ಲೂ ಇಂಗುಗುಂಡಿ ನಿರ್ಮಿಸಿಕೊಳ್ಳುವ ಮೂಲಕ ಅಂತರ್ಜಲ ವೃದ್ಧಿಗೆ ಸಾರ್ವಜನಿಕರು ಸಹಕರಿಸಬೇಕು' ಎಂದು ಕರೆ ನೀಡಿದ್ದಾರೆ.

<><><>

ಕೇಂದ್ರ ಉಕ್ಕು ಮತ್ತು ಭಾರಿ ಕೈಗಾರಿಕಾ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಇಂದು ಹಾಸನ ಜಿಲ್ಲಾ ಪ್ರವಾಸ ಕೈಗೊಂಡಿದ್ದು ಹೊಳೆನರಸೀಪುರ ತಾಲ್ಲೂಕಿನ ಮಾವಿನಕೆರೆ ಬೆಟ್ಟದ ರಂಗನಾಥಸ್ವಾಮಿ ದೇವಾಲಯಕ್ಕೆ ಭೇಟಿ ನೀಡಲಿದ್ದಾರೆ.

ಬಳಿಕ ಅವರು, ಹಾಸನ ನಗರದ ಭುವನಹಳ್ಳಿ ಶ್ರೀ ದೇವಿರಮ್ಮ ಜಾತ್ರಾ ಮಹೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>